ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/47/ಸುತ್ತೋಲೆ/2016-17(ಭಾ-2)

ದಿನಾಂಕ:06.04.2017.

# ಸುತ್ತೋಲೆ

ವಿಷಯ: ವಿಜ್ಞಾನ ವಿದ್ಯಾರ್ಥಿಗಳಿಗಾಗಿ ರಾಜ್ಯಮಟ್ಟದ ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆ 2016-17 ಹಾಗೂ ರಾಜ್ಯ ಮಟ್ಟದ ಅಂತರ ಕಾಲೇಜು ಕನ್ನಡ ವಿಜ್ಞಾನ ಉಪನ್ಯಾಸ ಸ್ಪರ್ಧೆ 2016-17 ನ್ನು ಆಯೋಜಿಸಿರುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು,ಬೆಂಗಳೂರು ಉತ್ತರ ಜಿಲ್ಲೆ ರವರ ಪತ್ರ ದಿನಾಂಕ: 05.04.2017.

* * * * * *

ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ಬೆಂಗಳೂರು ವತಿಯಿಂದ ವಿಜ್ಞಾನ ವಿದ್ಯಾರ್ಥಿಗಳಿಗಾಗಿ ರಾಜ್ಯಮಟ್ಟದ ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆ 2016-17 ಹಾಗೂ ರಾಜ್ಯ ಮಟ್ಟದ ಅಂತರ ಕಾಲೇಜು ಕನ್ನಡ ವಿಜ್ಞಾನ ಉಪನ್ಯಾಸ ಸ್ಪರ್ಧೆ 2016-17 ನ್ನು ದಿನಾಂಕ: 12.04.2017ರಂದು ಬೆಳಗ್ಗೆ 10.00 ಘಂಟೆಗೆ ಎಂ.ಇ.ಎಸ್ ಶಿಕ್ಷಣ ಮಹಾವಿದ್ಯಾಲಯ, ರಾಜಾಜಿನಗರ ಬೆಂಗಳೂರು(ಬಸವೇಶ್ವರ ಕಾಲೇಜು ಹತ್ತಿರ) ಇಲ್ಲಿ ಆಯೋಜಿಸಲಾಗಿರುತ್ತದೆ. ಸದರಿ ಸ್ಪರ್ಧೆಯಲ್ಲಿ ಆಸಕ್ತ ವಿಜ್ಞಾನ ವಿದ್ಯಾರ್ಥಿಗಳು ಭಾಗವಹಿಸಲು ಅನುಕೂಲವಾಗುವಂತೆ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸಿ ಪ್ರಚಾರ ನೀಡುವಂತೆ ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿ/ವಿವರಗಳಿಗೆ ಬಿತ್ತಿಪತ್ರವನ್ನು ಇದರೊಂದಿಗೆ ಲಗತ್ತಿಸಲಾಗಿದೆ.

<u>ಕಾರ್ಯಕ್ರಮದ ವಿವರಗಳು:</u>

1) ಸ್ಪರ್ಧೆಯಲ್ಲಿ ಭಾಗವಹಿಸುವವರು ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಬಿತ್ತಿಪತ್ರವನ್ನು ಓದಿಕೊಳ್ಳತಕ್ಕದ್ದು.
2) ಹೆಚ್ಚಿನ ಮಾಹಿತಿಗಾಗಿ ದೂ: 9844109706 & 9845458697 ಗಳನ್ನು ಸಂಪರ್ಕಿಸಬಹುದಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

<u>ಇವರಿಗೆ:</u>

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ- ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ)- ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು- ಕಡ್ಡಾಯವಾಗಿ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.

<u>ಪ್ರತಿಯನ್ನು:-</u>

1. ಅಧ್ಯಕ್ಷರು, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು,ಬೆಂಗಳೂರು ಉತ್ತರ ಜಿಲ್ಲೆ, #206/1, ಕೌಸ್ತುಭ ನಿಲಯ,ಗುರುಶ್ರೀ ವಿದ್ಯಾಕೇಂದ್ರದ ಹತ್ತಿರ ನಾಗಸಂದ್ರ ಅಂಚೆ, ಬೆಂಗಳೂರು-560073 .
2. ಕಛೇರಿ ಪ್ರತಿ.